ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ,
ಶ್ರೀರಂಗಪಟ್ಟಣ. RW-1

**ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ 18.11.2025**

**ಮುಂದುವರೆದ ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ಯಾರಾ 4 ರಲ್ಲಿ ಬರೆದಿರುವ ವಿಚಾರಗಳೆಲ್ಲವೂ ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ.

ನನ್ನ ಮುಖ್ಯ ವಿಚಾರಣೆಯ ಪ್ಯಾರಾ 5 ರಲ್ಲಿ ಬರೆದಿರುವ ವಿಚಾರಗಳನ್ನು ನಾನು ಎಂ.ಸಿ. ಸಂಖ್ಯೆ 5/2021 ಪ್ರಕರಣದಲ್ಲಿ ಬರೆದಿರುವುದಿಲ್ಲ.

ನನ್ನ ಮುಖ್ಯ ವಿಚಾರಣೆಯ 6 ನೇ ಪ್ಯಾರದಲ್ಲಿ ನನ್ನ ತಂದೆಯವರೇ ಹಣ ಖರ್ಚು ಮಾಡಿ ಮದುವೆ ಮಾಡಿರುತ್ತಾರೆ ಎನ್ನುವ ವಿಚಾರ ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ. ಅದೇ ರೀತಿ ಅರ್ಜಿದಾರರ ಮನೆಯವರೇ ಸಾಕಷ್ಟು ಖರ್ಚು ಮಾಡಿ ಚೆನ್ನಾಗಿ ಮದುವೆ ಮಾಡಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ.

ನನ್ನ ಮುಖ್ಯ ವಿಚಾರಣೆಯ 6 ನೇ ಪ್ಯಾರದಲ್ಲಿ ಬರೆದಿರುವ ವಿಚಾರಗಳಿಗೆ ಸಂಬಂಧಿಸಿದಂತೆ ನಾನು ಪೊಲೀಸ್ ಠಾಣೆಯಲ್ಲಿ ದೂರನ್ನು ನೀಡಿರುವುದಿಲ್ಲ. ಆದರೆ ನ್ಯಾಯಾ ಪಂಚಾಯಿತಿ ಆಗಿರುತ್ತದೆ.

ನನ್ನ ಮುಖ್ಯ ವಿಚಾರಣೆಯ 6 ನೇ ಪ್ಯಾರದಲ್ಲಿ ಬರೆದಿರುವ ವಿಚಾರಗಳು ಸುಳ್ಳಿನಿಂದ ಕೂಡಿದ್ದು ಅರ್ಜಿದಾರರು ನನಗೆ ಯಾವುದೇ ಮಾನಸಿಕ ಹಿಂಸೆ ಹಾಗೂ ಪ್ರಾಣಭಯ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯ 7 ನೇ ಪ್ಯಾರದಲ್ಲಿ ಬರೆದಿರುವ ವಿಚಾರಗಳು ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ.

ನನ್ನ ಮುಖ್ಯ ವಿಚಾರಣೆಯ 8 ನೇ ಪ್ಯಾರದಲ್ಲಿ ಬರೆದಿರುವ ವಿಚಾರಗಳು ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ.

ಅರ್ಜಿದಾರರು ಸ್ವಂತ ಬ್ಯೂಟಿ ಪಾರ್ಲರ್ ನಡೆಸುತ್ತಿರುವ ಬಗ್ಗೆ ನಾನು ದಾಖಲೆಗಳನ್ನು ನೀಡಿರುವುದಿಲ್ಲ. ಆ ರೀತಿ ಅರ್ಜಿದಾರರು ಯಾವುದೇ ಬ್ಯುಟಿ ಪಾರ್ಲರ್

ನಡೆಸುತ್ತಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರು ಅವರ ತಂದೆ ತಾಯಿಯ ಆಶ್ರಯದಲ್ಲಿ ಜೀವನ ಮಾಡುತ್ತಿದ್ದಾರೆ ಎಂದರೆ ಸರಿಯಲ್ಲ.

ನನ್ನ ಮುಖ್ಯ ವಿಚಾರಣೆಯ 10 ನೇ ಪ್ಯಾರದಲ್ಲಿ ನಾನು ಅರ್ಜಿದಾರರ ಜೊತೆ ಜೀವನ ಮಾಡಲು ಸಿದ್ದವಿರುತ್ತೇನೆ ಎಂದು ಹೇಳಿರುವ ವಿಚಾರ ಸುಳ್ಳಿನಿಂದ ಕೂಡಿರುತ್ತದ ಎಂದರೆ ಸರಿಯಲ್ಲ.

ನನ್ನ ಮುಖ್ಯ ವಿಚಾರಣೆಯ 12 ನೇ ಪ್ಯಾರದಲ್ಲಿ ಬರೆದಿರುವ ವಿಚಾರಗಳು ಸುಳ್ಳಿನಿಂದ ಕೂಡಿರುತ್ತದ ಎಂದರೆ ಸರಿಯಲ್ಲ. ನನಗೆ ನಮ್ಮ ಕುಟುಂಬದ ಸ್ವತ್ತುಗಳಿಂದ ಹಾಗೂ ನಾನು ಕಂಟ್ರಾಕ್ಟರ್ ಆದ ಕಾರಣ ಸದರಿ ಕೆಲಸದಿಂದ ನನಗೆ ಸಾಕಷ್ಟು ಆದಾಯ ಇದ್ದರೂ ಸಹಾ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಪಿತ್ರಾರ್ಜಿತವಾಗಿ ಸಾಕಷ್ಟು ಮನೆಗಳು ಇರುತ್ತವೆ ಎಂದರೆ ಸರಿಯಲ್ಲ.

ನಾನು ಪ್ರಥಮ ದರ್ಜೆ ವಿದ್ಯುತ್ ಗುತ್ತಿಗೆದಾರನಾಗಿದ್ದರೂ ಸಹಾ, ನನಗೆ ಸಾಕಷ್ಟು ಆದಾಯವಿದ್ದರೂ ಸಹಾ ಮತ್ತು ಅರ್ಜಿದಾರರನ್ನು ಸಾಕಿ ಮತ್ತು ಸಲಹುವ ಭಾದ್ಯಸ್ಥಿತಿಗೆ ನನಗೆ ಇದ್ದರೂ ಸಹಾ ಜೀವನಾಂಶ ನೀಡಬೇಕಾಗುತ್ತದೆ ಎಂಬ ದುರುದ್ದೇಶದಿಂದ ನನಗೆ ಯಾವುದೇ ಆದಾಯ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಅರ್ಜಿಯಲ್ಲಿ ಕೋರಿರುವಂತೆ ಜೀವನಾಂಶವನ್ನು ನೀಡಲು ನಾನು ಭಾದ್ಯಸ್ಥನು ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.